# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 926 |
| 2 | ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು) |
| 3 | ಉತ್ತರಿಸುವ ದಿನಾಂಕ | : | 22-02-2024 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಂಟೋನ್‌ಮೆಂಟ್‌ನಿಂದ ಮೇಕ್ರಿ ವೃತ್ತದವರೆಗೆ ರಸ್ತೆ ಅಗಲೀಕರಣ ಮಾಡಲು ಅರಮನೆ ಆವರಣದ ಜಾಗವನ್ನು ಪಡೆದು ರಸ್ತೆ ಅಭಿವೃದ್ಧಿ ಪಡಿಸಲು ಸರ್ಕಾರ ಪ್ರಕ್ರಿಯೇ ಪ್ರಾರಂಭಿಸಿರುವುದು ನಿಜವೇ; | ಸರ್ಕಾರದ ಆದೇಶ ಸಂಖ್ಯೆ: ನಅಇ 269 ಎಂಎನ್‌ವೈ 2018 (ಭಾಗ-4), ದಿನಾಂಕ: 08-12-2022ರಲ್ಲಿ ಸ್ವತ್ತಿನ ಮಾಲೀಕತ್ವದ ಕುರಿತು ಸಕ್ಷಮ ನ್ಯಾಯಾಲಯಗಳಲ್ಲಿ ಯಾವುದೇ ವಿವಾದ ಇದ್ದಲ್ಲಿ, ವಿವಾದವು ಇತ್ಯರ್ಥವಾಗುವವರೆಗೆ ಟಿ.ಡಿ.ಆರ್.. ನೀಡಲು ಅವಕಾಶವಿರುವುದಿಲ್ಲ ವಾದ್ದರಿಂದ ಮತ್ತು ಇದು ರಾಜ್ಯ ಸರ್ಕಾರದ ಹಿತಾಸಕ್ತಿಗೆ ವಿರುದ್ಧವಾಗಿರುವುದರಿಂದ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಬಳಿ ಲಭ್ಯವಿರುವ ಜಾಗದಲ್ಲಿ (Way of Right) ರಸ್ತೆಯನ್ನು ವಿಸ್ತರಿಸಲು ಪರ್ಯಾಯ ಮಾರ್ಗೋಪಾಯಗಳನ್ನು ಯೋಚಿಸಿ, ಕ್ರಮವಹಿಸಿರುವುದರಿಂದ, ಪ್ರಶ್ನಿತ ಬೆಂಗಳೂರು ಅರಮನೆ ಮೈದಾನದ ಸ್ವತ್ತಿನ ಭಾಗಶಃ 15 ಎಕರೆ 39 ಗುಂಟೆ ಜಾಗವನ್ನು ಜಯಮಹಲ್ ರಸ್ತೆ ಮತ್ತು ಬಳ್ಳಾರಿ ರಸ್ತೆ ವಿಸ್ತರಣೆ ಉದ್ದೇಶಕ್ಕಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಶಕ್ಕೆ ಪಡೆಯುವ ಪ್ರಸ್ತಾವನೆಯನ್ನು ಕೈಬಿಟ್ಟು ಆದೇಶಿಸಲಾಗಿದೆ.<br><br>ಮುಂದುವರೆದು, ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರು, ಈ ಹಿಂದೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಜಯಮಹಲ್ ರಸ್ತೆ ಮತ್ತು ಬಳ್ಳಾರಿ ರಸ್ತೆ ಅಗಲೀಕರಣಕ್ಕೆ ಸಂಬಂಧಿಸಿದಂತೆ ದಿನಾಂಕ: 30-03-2009 ರಂದು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯನ್ನು ಹಿಂಪಡೆಯಲು ಉದ್ದೇಶಿಸಿರುವುದಾಗಿ ತಿಳಿಸಿ, ಅದರಂತೆ ಪ್ರಸ್ತಾವನೆ ಹಿಂದಿರುಗಿಸಲು ಕೋರಿರುವುದನ್ನು ಮಾನ್ಯ ಮಾಡಿ, ಪ್ರಸ್ತಾವನೆಯನ್ನು ಹಿಂದಿರುಗಿಸಿದೆ.<br><br>ಪ್ರಸ್ತುತ ಮೇಲಿನ ವಿಷಯವೂ ಒಳಗೊಂಡಂತೆ ಬೆಂಗಳೂರು ಅರಮನೆ ಮೈದಾನದ ಆಸ್ತಿಗೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಕರಣಗಳು ಬಾಕಿಯಿದ್ದು, ಅಂತಿಮ ಆದೇಶವನ್ನು ನಿರೀಕ್ಷಿಸಲಾಗಿದೆ. |
| ಆ) | ಪ್ರಸ್ತುತ ವಶಪಡಿಸಿಕೊಂಡಿರುವ ಜಾಗವನ್ನು ಅರಮನೆಯವರು ಪುನಃ ತಮ್ಮ ವಶಕ್ಕೆ ಪಡೆದು ತಡೆಗೋಡೆ ನಿರ್ಮಾಣ ಮಾಡುತ್ತಿರುವುದಕ್ಕೆ ಕಾರಣವೇನು; (ವಿವರ ನೀಡುವುದು) | |
| ಇ) | ಈ ರಸ್ತೆ ಅಗಲೀಕರಣ ಮಾಡದಿರುವ ನಿರ್ಧಾರಕ್ಕೆ ಸರ್ಕಾರ ಬರಲು ಕಾರಣವೇನು? | |

**ನಅಇ 81 ಎಂಎನ್‌ವೈ 2024**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ